# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು

ಸಂ:ಸಿಎಸ್1/ಗಣಕಶಾಖೆ/ಎಸ್.ಎಸ್.ಎಲ್.ಸಿ/ತಾ.ಪ್ರ.ಪ.ತ್ರಿ/01/2022-23 ದಿನಾಂಕ: 02-02-2023

**- ಸುತ್ತೋಲೆ -**

**ವಿಷಯ: 2023ರ ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಗೆ ನೋಂದಣಿಯಾಗಿರುವ ವಿದ್ಯಾರ್ಥಿಗಳ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ಮತ್ತು ಅಗತ್ಯವಿದ್ದಲ್ಲಿ ತಿದ್ದುಪಡಿಗಳನ್ನು ಅಪ್‌ಡೇಟ್ ಮಾಡುವ ಬಗ್ಗೆ.**

*****

ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯ (ಶಾಲಾ ಅಭ್ಯರ್ಥಿ, ಖಾಸಗಿ ಅಭ್ಯರ್ಥಿ, ಪುನರಾವರ್ತಿತ ಅಭ್ಯರ್ಥಿಗಳ) 2023ರ ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಯನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಮತ್ತು ವಿದ್ಯಾರ್ಥಿಗಳ ವಿವರಗಳಲ್ಲಿ ತಿದ್ದುಪಡಿಗಳಿದ್ದಲ್ಲಿ ಆನ್‌ಲೈನ್ ಮೂಲಕ ಅಪ್‌ಡೇಟ್ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಮಂಡಲಿಯ ಜಾಲತಾಣದಲ್ಲಿ ಲಭ್ಯವಿರುವ ತಂತ್ರಾಂಶವನ್ನು ಬಳಸಿ ಎಲ್ಲಾ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು, ಪರಿಶೀಲಿಸಿ ಹಾಗೂ ಅಗತ್ಯವಿದ್ದಲ್ಲಿ ವಿದ್ಯಾರ್ಥಿಗಳ ವೈಯಕ್ತಿಕ ವಿವರಗಳ ತಿದ್ದುಪಡಿಗಳನ್ನು ಅಪ್‌ಡೇಟ್ ಮಾಡಲು ಸೂಚಿಸಿದೆ. ವಿದ್ಯಾರ್ಥಿಗಳ ವಿವರಗಳನ್ನು ಪರಿಶೀಲಿಸಿ ಅಂತಿಮಗೊಳಿಸಲು ಇದು ಕೊನೆಯ ಅವಕಾಶವಾಗಿದ್ದು, ಇದೇ ವಿವರಗಳು ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರ ಹಾಗೂ ಅಂಕಪಟ್ಟಿಗಳಲ್ಲಿ ನಮೂದಾಗುತ್ತವೆ. ಈ ಬಗ್ಗೆ ಏನಾದರೂ ವ್ಯತ್ಯಾಸಗಳು ಕಂಡುಬಂದಲ್ಲಿ ಮುಖ್ಯ ಶಿಕ್ಷಕರನ್ನೇ ಹೊಣೆಗಾರರನ್ನಾಗಿಸಲಾಗುವುದು.

1) ಮಂಡಲಿಯ ಜಾಲತಾಣ https://kseab.karnataka.gov.in ನ ಶಾಲಾ ಲಾಗಿನ್‌ನಲ್ಲಿ ತಂತ್ರಾಂಶ ಲಭ್ಯವಿದೆ.
2) ಲಾಗಿನ್ ಆದ ನಂತರ ಮೊದಲು ಆಯಾ ಶಾಲೆಯ ಮುಖ್ಯಸ್ಥರು ತಮ್ಮ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಬೇಕು.
3) ತಾತ್ಕಾಲಿಕ ಪ್ರವೇಶ ಪತ್ರದಲ್ಲಿ 8 ಅಂಶಗಳಲ್ಲಿ ತಿದ್ದುಪಡಿಗಳನ್ನು ಮಾಡಲು ಅವಕಾಶ ಕಲ್ಪಿಸಲಾಗಿದೆ. ತಿದ್ದುಪಡಿಯ ನಂತರ ಪರಿಷ್ಕೃತ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ.
4) ಶಾಲಾ ಅಭ್ಯರ್ಥಿಗಳ ಎಸ್.ಎ.ಟಿ.ಎಸ್ ನಂಬರ್ (**SATS NUMBER**), ಖಾಸಗಿ ಅಭ್ಯರ್ಥಿಗಳ ರೆಫರೆನ್ಸ್ ನಂಬರ್ (**REFERENCE NUMBER**) ಹಾಗೂ ಪುನರಾವರ್ತಿತ ಅಭ್ಯರ್ಥಿಗಳ ನೋಂದಣಿ ಸಂಖ್ಯೆ (**REGISTER NUMBER**) ನಮೂದಿಸಿ ಅಗತ್ಯವಿದ್ದಲ್ಲಿ ತಿದ್ದುಪಡಿಗಳನ್ನು ಮಾಡಬಹುದಾಗಿರುತ್ತದೆ.
5) ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ, ಧರ್ಮ ಮತು ಲಿಂಗ ಇವುಗಳಲ್ಲಿ ಯಾವುದಾದರು ತಿದ್ದುಪಡಿಗಳಿದ್ದಲ್ಲಿ, ಖಾಸಗಿ ವಿದ್ಯಾರ್ಥಿಗಳ (**CCEPF**) ವಿವರಗಳನ್ನು ನೇರವಾಗಿ ತಿದ್ದುಪಡಿ ಮಾಡಬಹುದಾಗಿರುತ್ತದೆ. ಆದರೆ, ಶಾಲಾ ವಿದ್ಯಾರ್ಥಿಗಳ (**CCERF**) ವಿವರಗಳನ್ನು ಮಂಡಲಿಯ ಜಾಲತಾಣದಲ್ಲಿ ನೇರವಾಗಿ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಮೊದಲು ಎಸ್.ಎ.ಟಿ.ಎಸ್ ಡೇಟಾಬೇಸ್‌ನಲ್ಲಿ ತಿದ್ದುಪಡಿ ಮಾಡಿ ನಂತರ ಮಂಡಲಿಯ ಶಾಲಾ ಲಾಗಿನ್‌ನಲ್ಲಿ Update Latest SATS Data ಮೇಲೆ ಕ್ಲಿಕ್ ಮಾಡಿದಾಗ SATS ನಿಂದ updated data fetch ಆಗುತ್ತದೆ. ನಂತರ save ಮಾಡಿ printout ತೆಗೆದಿಟ್ಟುಕೊಳ್ಳುವುದು.
6) ತಿದ್ದುಪಡಿ ಮಾಡಲಾದ ಪರಿಷ್ಕೃತ ತಾತ್ಕಾಲಿಕ ಪ್ರವೇಶ ಪತ್ರಗಳನ್ನು Download provisional AT (student wise) ಆಯ್ಕೆಯ ಮೂಲಕ Individual ಆಗಿಯೇ printout ಪಡೆಯಬೇಕಾಗಿರುತ್ತದೆ. (school wise ಆಯ್ಕೆಯಲ್ಲಿ ಪರಿಷ್ಕೃತ ಮಾಹಿತಿಗಳು ಅಪಡೇಟ್ ಆಗುವುದಿಲ್ಲ)

7) ಶಾಲಾ ವಿದ್ಯಾರ್ಥಿಗಳ ಹಾಗೂ ಪುನರಾವರ್ತಿತ ಅಭ್ಯರ್ಥಿಗಳ ಫೋಟೋ ಮತ್ತು ಸಹಿಯನ್ನು ಮಂಡಲಿಯ ಶಾಲಾ ಲಾಗಿನ್‌ನಲ್ಲಿ ನೇರವಾಗಿ ತಿದ್ದುಪಡಿ ಮಾಡಲು ಅವಕಾಶ ಮಾಡಿಕೊಡಲಾಗಿದೆ.

ಮೇಲ್ಕಂಡ ಈ ಅಂಶಗಳನ್ನು ಹೊರತುಪಡಿಸಿ ಭಾಷೆ/ವಿಷಯ, ಮಾಧ್ಯಮ, ದೈಹಿಕ ಸ್ಥಿತಿ ಹಾಗೂ ಸಾಮಾಜಿಕ ಪ್ರವರ್ಗಗಳಲ್ಲಿ ಯಾವುದಾದರೂ ಬದಲಾವಣೆಗಳಿದ್ದಲ್ಲಿ ಮಂಡಲಿಯಲ್ಲಿನ ಸಂಬಂಧಿಸಿದ ಜಿಲ್ಲೆಯ ಶಾಖಾಧಿಕಾರಿಗಳಿಗೆ ಲಿಖಿತವಾಗಿ ಮನವಿಯನ್ನು ಸಲ್ಲಿಸುವುದು.

ಮುಖ್ಯ ಶಿಕ್ಷಕರ ಹಂತದಲ್ಲಿ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು, ತಿದ್ದುಪಡಿಗಳನ್ನು ಮಾಡಲು **19-02-2023** ಅಂತಿಮ ದಿನಾಂಕವಾಗಿರುತ್ತದೆ.

(ಗೋಪಾಲಕೃಷ್ಣ ಹೆಚ್.ಎನ್.)
ನಿರ್ದೇಶಕರು, (ಪರೀಕ್ಷೆಗಳು)

**ಅಗತ್ಯ ಕ್ರಮಕ್ಕಾಗಿ :**

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ